# ಕರ್ನಾಟಕವಿಧಾನಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 313 |
| ಸದಸ್ಯರ ಹೆಸರು | : | ಶ್ರೀಎಸ್.ರವಿ |
| ಉತ್ತರಿಸುವ ದಿನಾಂಕ | : | 07.07.2023 |
| ಉತ್ತರಿಸುವ ಸಚಿವರು | : | ಪರಿಶಿಷ್ಟ ಪಂಗಡಗಳ ಕಲ್ಯಾಣ,ಯುವಜನ ಸೇವಾ ಮತ್ತು ಕ್ರೀಡಾ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಮೂಲ ಆದಿವಾಸಿಗಳ ಅಭಿವೃದ್ಧಿಗಾಗಿ (ಜೇನು, ಕುರುಬ, ಕೊರಗ ಮತ್ತು ಇತರೆ ಅರಣ್ಯ ಆಧಾರಿತ ಬುಡಕಟ್ಟು ಸಮುದಾಯ) ಮತ್ತು ಈ ಸಮುದಾಯಗಳ ಕಲೆ, ಸಂಸ್ಕೃತಿ, ಭಾಷೆ ಮತ್ತು ಇತರೆ ವಿಷಯಗಳ ವಿಶೇಷ ಅಧ್ಯಯನಕ್ಕಾಗಿ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು ಇದರ ಅಡಿಯಲ್ಲಿ 2016 ರಲ್ಲಿ ಸ್ಥಾಪನೆಯಾದ ಮೂಲ ಆದಿವಾಸಿ ಅಧ್ಯಯನ ಕೇಂದ್ರ ಪ್ರಾರಂಭವಾದ ಒಂದೆರಡು ವರ್ಷಗಳಲ್ಲೇ ಮುಚ್ಚಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಮೂಲ ಆದಿವಾಸಿ ಅಧ್ಯಯನ ಕೇಂದ್ರವನ್ನು ಮುಚ್ಚಲು ಕಾರಣಗಳೇನು; (ಸಂಪೂರ್ಣ ವಿವರ ನೀಡುವುದು) | ಬಂದಿಲ್ಲ |
| ಆ) | ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು ಇದರ ಅಡಿಯಲ್ಲಿ 2016ರಲ್ಲಿ ಸ್ಥಾಪನೆಯಾದ ಮೂಲ ಆದಿವಾಸಿ ಅಧ್ಯಯನ ಕೇಂದ್ರವನ್ನು ಪುನ: ಪ್ರಾರಂಭಿಸುವ ಇಚ್ಛೆ ಸರ್ಕಾರಕ್ಕಿದೆಯೇ; ಹಾಗಿದ್ದಲ್ಲಿ, ಈ ಕೇಂದ್ರವನ್ನು ಪ್ರಾರಂಭಿಸಲು ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳುವುದು; | ಉದ್ಭವಿಸುವುದಿಲ್ಲ. |
| ಇ) | ಈ ಕೇಂದ್ರಕ್ಕೆ ಮೂಲ ಆದಿವಾಸಿ ಜನಾಂಗಕ್ಕೆ ಸೇರಿದ ಪ್ರತಿಭಾವಂತರನ್ನು ಸಂಶೋಧನಾಧಿಕಾರಿಯನ್ನಾಗಿ ನೇಮಿಸುವ ಪ್ರಕ್ರಿಯೆಯು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತು ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು) | ಸಂಶೋಧನಾಧಿಕಾರಿ ಹುದ್ದೆಗೆ ಸಂಸ್ಥೆಯ ವೃಂದ ಮತ್ತು ನೇಮಕಾತಿ ನಿಯಮಗಳ ಪ್ರಕಾರ ಯಾವುದಾದರೂ ವಿಶ್ವವಿದ್ಯಾಲಯದ ಮಾನವ ಶಾಸ್ತ್ರದ ಪ್ರಾಧ್ಯಾಪಕರನ್ನು ನಿಯೋಜಿಸಬಹುದಾಗಿರುತ್ತದೆ ಹಾಗೂ ಕ್ಷೇತ್ರ ಸಂಶೋಧಕರ ಹುದ್ದೆಯನ್ನು ಹೊರಗುತ್ತಿಗೆ ಆಧಾರದ ಮೇಲೆ ತೆಗೆದುಕೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ.<br>ಇದರಂತೆ ಮೂಲ ಆದಿವಾಸಿ ಸಮುದಾಯದ ಒಬ್ಬ ಪ್ರತಿಭಾವಂತರನ್ನು ಹೊರಗುತ್ತಿಗೆ ಮೇರೆಗೆ ನೇಮಕ ಮಾಡಿಕೊಳ್ಳಲಾಗಿತ್ತು. |

ಸಕಇ 46 ಎಸ್‌ಟಿಪಿ 2023

(ನಾಗೇಂದ್ರ.ಬಿ)
ಪರಿಶಿಷ್ಟ ಪಂಗಡಗಳ ಕಲ್ಯಾಣ, ಯುವಜನ
ಸೇವಾ ಮತ್ತು ಕ್ರೀಡಾ ಸಚಿವರು.